ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 02–08–2021

# ಮಾಧ್ಯಮ ಆಹ್ವಾನ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು ವಿಧಾನ ಪರಿಷತ್ ಸದಸ್ಯರು ಹಾಗೂ ಆರ್ಥಿಕ ಇಲಾಖೆ ಮತ್ತು ಯೋಜನೆ ಹಾಗೂ ಸಾಂಖ್ಯಿಕ ಇಲಾಖೆಯ ಅಧಿಕಾರಿಗಳ ಜೊತೆ ಸಭೆ.

## ಅಧ್ಯಕ್ಷತೆ:

**ಬಸವರಾಜ ಎಸ್.ಹೊರಟ್ಟಿ, ಸಭಾಪತಿಗಳು ಕರ್ನಾಟಕ ವಿಧಾನ ಪರಿಷತ್.**

**ದಿನಾಂಕ: 03–08–2021, ಮಂಗಳವಾರ,**
**ಸಮಯ: ಮಧ್ಯಾಹ್ನ 03–00ಗಂಟೆಗೆ,**
**ಸ್ಥಳ: ಕೊಠಡಿ ಸಂಖ್ಯೆ 334, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ಟೋಕಿಯೊ ಒಲಂಪಿಕ್ಸ್: ಸೆಮಿಫೈನಲ್‌ಗೆ ಪ್ರವೇಶಿಸಿದ ಭಾರತ ಮಹಿಳಾ ಹಾಕಿ ತಂಡಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿನಂದನೆ

ಬೆಂಗಳೂರು ಆಗಸ್ಟ್ 2(ಕರ್ನಾಟಕ ವಾರ್ತೆ) :

ಜಪಾನ್ ರಾಜಧಾನಿ ಟೋಕಿಯೊದಲ್ಲಿ ನಡೆಯುತ್ತಿರುವ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಸೆಮಿಫೈನಲ್ ಪ್ರವೇಶಿಸಿರುವ ಭಾರತ ಮಹಿಳೆಯರ ಹಾಕಿ ತಂಡವನ್ನು ಕರ್ನಾಟಕ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಅಭಿನಂದಿಸಿದ್ದಾರೆ.

ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಬಲಿಷ್ಠ ಆಸ್ಟ್ರೇಲಿಯಾ ತಂಡವನ್ನು 1-0 ಅಂತರ ಗೋಲುಗಳಿಂದ ಮಣಿಸಿ ಭಾರತ ಮಹಿಳೆಯರ ಹಾಕಿ ತಂಡ ಸೆಮಿಫೈನಲ್ ಗೆ ಪ್ರವೇಶಿಸಿದೆ. ಭಾರತ ಮಹಿಳೆಯರ ಹಾಕಿ ತಂಡದ ಈ ಅಭೂತಪೂರ್ವ ಸಾಧನೆಗೆ ಕರ್ನಾಟಕ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಅಭಿನಂದನೆ ತಿಳಿಸಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಅವರು, ಒಲಂಪಿಕ್ಸ್‌ನಲ್ಲಿ ಮೊಟ್ಟ ಮೊದಲ ಬಾರಿಗೆ ಸೆಮಿಫೈನಲ್ ತಲುಪುವ ಮೂಲಕ ಇತಿಹಾಸ ಸೃಷ್ಟಿಸಿದ ಭಾರತೀಯ ಮಹಿಳಾ ಹಾಕಿ ತಂಡದ ಎಲ್ಲ ಪ್ರತಿಭಾನ್ವಿತ ಹೆಣ್ಣು ಮಕ್ಕಳಿಗೆ ನಾನು ಹೃತ್ಪೂರ್ವಕವಾಗಿ ಅಭಿನಂದಿಸುವೆ. ಟೋಕಿಯೋ ಒಲಿಂಪಿಕ್ಸ್ ಭಾರತೀಯರಿಗೆ ನಿಜಕ್ಕೂ ಸ್ಮರಣೀಯ ಎಂದು ಟ್ವೀಟಿಸಿದ್ದಾರೆ.

ಇನ್ನು ನಿನ್ನೆ ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತ ಪುರುಷರ ಹಾಕಿ ತಂಡ ಗ್ರೇಟ್ ಬ್ರಿಟನ್ ವಿರುದ್ಧ 3-1 ಗೋಲುಗಳಿಂದ ಮಣಿಸಿ ಸೆಮಿಫೈನಲ್ ಪ್ರವೇಶಿಸಿತ್ತು. ಈ ವೇಳೆ ಟ್ವೀಟ್ ಮಾಡಿ ಅಭಿನಂದಿಸಿದ್ದ ರಾಜ್ಯಪಾಲರು ಟೋಕಿಯೊ ಒಲಂಪಿಕ್ಸ್ ಕ್ರೀಡಾಕೂಟದ ಪುರುಷರ ಹಾಕಿ ವಿಭಾಗದಲ್ಲಿ ಕ್ವಾರ್ಟರ್‌ಫೈನಲ್ ನಲ್ಲಿ ಗೆಲುವು ಸಾಧಿಸಿ, ಸೆಮಿಫೈನಲ್ ಗೆ ಲಗ್ಗೆ ಇಟ್ಟ ಭಾರತ ತಂಡಕ್ಕೆ ಹೃದಯ ಪೂರ್ವಕ ಅಭಿನಂದನೆಗಳು. ಭಾರತ ತಂಡವು ಅಂತಿಮ ಪಂದ್ಯದಲ್ಲಿ ಗೆದ್ದು, ಕ್ರೀಡಾ ಲೋಕದಲ್ಲಿ ಭಾರತದ ಕೀರ್ತಿ ಪತಾಕೆ ಎತ್ತಿ ಹಿಡಿಯಲಿ ಎಂದು ಎಲ್ಲಾ ಭಾರತೀಯರ ಪರವಾಗಿ ಆಶಿಸುತ್ತೇನೆ ಎಂದು ಟ್ವೀಟಿಸಿದ್ದರು.

**ಭಾರತದ ಹೆಮ್ಮೆಯ ಆಟಗಾರ್ತಿ ಪಿ.ವಿ.ಸಿಂಧು ಅವರಿಗೆ**

**ಸಭಾಪತಿ ಬಸವರಾಜ ಹೊರಟ್ಟಿಯವರು ಅಭಿನಂದನೆ ಸಲ್ಲಿಕೆ**

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಭಾರತದ ಹೆಮ್ಮೆಯ ಆಟಗಾರ್ತಿ ಬ್ಯಾಡ್ಮಿಂಟನ್ ಚಾಂಪಿಯನ್ ಪಿ.ವಿ.ಸಿಂಧು ಟೋಕಿಯೋ ಒಲಂಪಿಕ್ಸ್ ನಲ್ಲಿ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಕಂಚಿನ ಪದಕ ಪಡೆಯುವ ಮೂಲಕ ಹೊಸ ಇತಿಹಾಸ ನಿರ್ಮಿಸಿ ಭಾರತದ ಕೀರ್ತಿ ಪತಾಕೆಯನ್ನು ವಿಶ್ವದಾದ್ಯಂತ ಪಸರಿಸಿರುವುದು ಹೆಮ್ಮೆಯ ಸಂಗತಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ಶ್ಲಾಘಿಸಿದ್ದಾರೆ.

ಒಲಂಪಿಕ್ಸ್‌ನಲ್ಲಿ ಸತತವಾಗಿ ಎರಡು ಪದಕ ಗೆದ್ದ ಭಾರತದ ಮೊದಲ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ಪಿ.ವಿ.ಸಿಂಧು ಕಂಚಿನ ಪದಕ ಗೆಲ್ಲುವ ಮೂಲಕ ಇಡೀ ಭಾರತ ಹೆಮ್ಮೆಯಿಂದ ಬೀಗುವಂತೆ ಮಾಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಚೀನಾ ಆಟಗಾರ್ತಿಯನ್ನು ಮಣಿಸಿದ ಪಿ.ವಿ.ಸಿಂಧು ಅವರಿಗೆ ಸಮಸ್ತ ಕನ್ನಡಿಗರ ಪರವಾಗಿ ಅಭಿನಂದನೆಗಳು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಶಾಸಕರ ಅನುದಾನ ಬಿಡುಗಡೆ ಕುರಿತು**

**ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರ ನೇತೃತ್ವದಲ್ಲಿ ಸಭೆ.**

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಬಿಡುಗಡೆಗೊಂಡಿರುವ ಅನುದಾನ ಕಡಿತ ಕುರಿತು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿಯವರು ನಾಳೆ ವಿಧಾನ ಪರಿಷತ್ತಿನ ಎಲ್ಲ 75 ಸದಸ್ಯರ ಸಭೆಯನ್ನು ಕರೆದಿದ್ದಾರೆ.

ಬೆಂಗಳೂರಿನ ವಿಧಾನ ಸೌಧದ ಮೂರನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ: 334ರಲ್ಲಿ ಮಧ್ಯಾಹ್ನ 03-00 ಘಂಟೆಗೆ ನಡೆಯಲಿರುವ ಸಭೆಯಲ್ಲಿ ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಮತ್ತು ಸಾಂಖ್ಯಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯೂ ಸೇರಿದಂತೆ ವಿವಿಧ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ 2018-19, 2019-20 ಮತ್ತು 2020-21ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರಿಗೂ ಪ್ರತಿವರ್ಷ ರಾಜ್ಯ ಸರಕಾರ ನೀಡುತ್ತಿರುವ ಎರಡು ಕೋಟಿ ರೂಪಾಯಿಗಳ ಅನುದಾನವನ್ನು ಕಡಿತಗೊಳಿಸಲಾಗಿದೆ. ಅಲ್ಲದೇ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಬರುವ ಶಾಸಕರು ಲೋಕಸಭೆ/ರಾಜ್ಯಸಭೆ ಸದಸ್ಯರುಗಳಿಗೆ ಅವರ ಕ್ಷೇತ್ರದ ಅಭಿವೃದ್ಧಿಗೆ 2018-19ನೇ ಸಾಲಿನ ಆಯ-ವ್ಯಯದಲ್ಲಿ ಮುಖ್ಯಮಂತ್ರಿಯವರು ಘೋಷಿಸಿದ್ದ 95 ಕೋಟಿ ಅನುದಾನ ಈವರೆಗೆ ಬಿಡುಗಡೆಯಾಗಿರುವುದಿಲ್ಲ ಹಾಗೂ ಅನುದಾನಕ್ಕೆ ಅನುಗುಣವಾಗಿ ಆಯಾಯ ವರ್ಷಕ್ಕೆ ಕೈಗೊಳ್ಳಬಹುದಾದ ಕಾಮಗಾರಿಗಳು ಬಹುತೇಕ ಸ್ಥಗಿತಗೊಂಡಿವೆ ಮತ್ತು ಕೆಲವು ಕಾಮಗಾರಿಗಳು ಆತಳಿತಾತ್ಮಕ ಮಂಜೂರಾತಿ ಪಡೆದಿದ್ದರೂ ಪೂರ್ಣ ರೀತಿಯಲ್ಲಿ ಅನುಷ್ಠಾನಗೊಂಡಿರುವುದಿಲ್ಲ ಎನ್ನುವ ವಿಧಾನ ಪರಿಷತ್ತಿನ ಹಲವು ಸದಸ್ಯರ ಅಭಿಪ್ರಾಯದ ಹಿನ್ನೆಲೆಯಲ್ಲಿ ಈ ಸಭೆಯನ್ನು ಕರೆಯಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ವಿಶ್ವವಿದ್ಯಾಲಯ: ಬಿ.ಎ, ಎಲ್.ಎಲ್.ಬಿ. ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದಲ್ಲಿರುವ ಕಾನೂನು ಮಹಾವಿದ್ಯಾಲಯದಲ್ಲಿ 2021–22ನೇ ಶೈಕ್ಷಣಿಕ ಸಾಲಿನ ಐದು ವರ್ಷದ ಬಿ.ಎ, ಎಲ್.ಎಲ್.ಬಿ. (ಹಾನರ್ಸ್ ಕೋರ್ಸ್) ಪದವಿಯ ಮೊದಲ ಸೆಮಿಸ್ಟರ್ ಕೋರ್ಸ್‌ನ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ. (10+2) ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ ಶೇ. 45, ಪರಿಶಿಷ್ಟ ಜಾತಿ ಹಾಗೂ ಪಂಗಡಗಳಿಗೆ ಶೇ. 40 ರಷ್ಟು ಹಾಗೂ ಓ.ಬಿ.ಸಿ. ಗೆ ಶೇ. 42 ರಷ್ಟು (ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ) ಅಂಕಗಳನ್ನು ಗಳಿಸಿರುವವರು ಮಾತ್ರ ಅರ್ಹರಾಗಿರುತ್ತಾರೆ. ಹಾಗೂ ಗರಿಷ್ಠ ವಯೋಮಿತಿ ಸಾಮಾನ್ಯ ವರ್ಗಕ್ಕೆ 20 ವರ್ಷಗಳು ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ ಹಾಗೂ ಓ.ಬಿ.ಸಿ. ಮತ್ತು ವಿದೇಶಿ ವಿದ್ಯಾರ್ಥಿಗಳಿಗೆ 22 ವರ್ಷಗಳು. ಅರ್ಜಿ ಶುಲ್ಕ ಸಾಮಾನ್ಯ ಮತ್ತು ಸೆಲ್ಫ್ ಫೈನಾನ್ಸ್ ಸೀಟು ಎರಡಕ್ಕೂ ಸಾಮಾನ್ಯ ವರ್ಗ/ ಓ.ಬಿ.ಸಿ ವರ್ಗಗಳಿಗೆ ರೂ.850, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ ಪ್ರವರ್ಗ–1 ವರ್ಗಗಳಿಗೆ ರೂ.550/– ಗಳನ್ನು ನಿಗಧಿಪಡಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ದಿನಾಂಕ: 10–08–2021 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿ ನಮೂನೆ ಮತ್ತು ಇತರ ವಿವರಗಳನ್ನೊಳಗೊಂಡ ಕೈಪಿಡಿಯು ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್ www.bangaloreuniversity.ac.in ಅಥವಾ www.ulc.bangalore.com ನಲ್ಲಿ ಲಭ್ಯವಿರುತ್ತದೆ. ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ಡೌನ್‌ಲೋಡ್ ಮಾಡಿಕೊಂಡು ಸಂಬಂಧಪಟ್ಟ ಎಲ್ಲಾ ದೃಢೀಕೃತ ದಾಖಲೆಗಳನ್ನು ದಿನಾಂಕ: 12–08–2021 ರೊಳಗೆ ಪ್ರಾಂಶುಪಾಲರು, ವಿಶ್ವವಿದ್ಯಾಲಯ ಕಾನೂನು ಕಾಲೇಜು, ಜ್ಞಾನಭಾರತಿ ಆವರಣ, ಬೆಂಗಳೂರು–560 056 ರವರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: ಪ್ರಾಂಶುಪಾಲರು: 080– 23392384 / 22961174, ಕಛೇರಿ ಸಂಖ್ಯೆ: 080–22961172 ನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Applications are invited for admission B.A., LL.B Degree Courses

**Bengaluru August 02, (Karnataka Information):**

Applications are invited for admission to the I Semester of Five Years B.A., LL.B (Honors) Degree Course in the University Law College, Jnana Bharathi Campus, Bangalore University, Bangalore-560 056 for the academic year 2021-22 from candidates who have passed 10+2 with not less than 45% (in the case of SC/ST -40% and OBC-42% having income less than Rs. 8 lakh per year, within Karnataka students only) of the total marks. General merit candidates who have not completed **20 years** of age as on the last date for submission of application of the year of admission (In the case of SC, ST Category-I and Foreign Students, 22 years of age) are eligible to apply. For further details visit www.ulcbangalore.com

Application shall be filled online by visiting the University website www.bangaloreuniversity.ac.in or **www.ulcbangalore.com.** Online filled in Application should be downloaded and downloaded copy shall be submitted to the **Principal, University Law College, Jnana Bharathi Campus, Bangalore University, Bengaluru – 560 056** on or before 12-08-2021 along with self attested copies of the marks cards and relevant documents. Application/Processing fee as shown in the box shall be paid online only in the website.

**Application/Processing Fee Seats under both Regular & Self Finance Quota** General category & Others Rs. 850/-, SC/ST/Category-I Rs. 550/-

**Note:** Candidates can apply for seats in both Regular and Self Finance quota by filling the relevant column in the Application Form. For more details, the candidates are advised to visit University website.

## ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 03 ವರ್ಷಗಳ ಡಿಪ್ಲೋಮಾ ಕೋರ್ಸ್‍ಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ 2021-22 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಕೋರ್ಸ್‍ಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ವ್ಯಾಸಂಗದ ಸಮಯದಲ್ಲಿ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.1000/- ರಿಂದ 1,200/- ರವರೆಗೆ ಶಿಷ್ಯವೇತನ ನೀಡಲಾಗುವುದು ಹಾಗೂ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು. ಅರ್ಜಿ ಸಲ್ಲಿಸಲು ಆಗಸ್ಟ್ 16, 2021 ಕೊನೆಯ ದಿನಾಂಕವಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-582102 ಇವರಿಗೆ ಸಲ್ಲಿಸಬೇಕು. ಒಟ್ಟು 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.

ಎಸ್‍ಎಸ್‍ಎಲ್‍ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‍ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ದಿನಾಂಕ: 01-07-2021ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು. ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25ರ ವಯೋಮಿತಿಯಲ್ಲಿರಬೇಕು.

ಡಿಪ್ಲೋಮಾ ಕೋರ್ಸಿಗೆ ಲಭ್ಯವಿರುವ ಸಂಸ್ಥೆಗಳು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ) - 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) - 17 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) - 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) - 02 ಅಭ್ಯರ್ಥಿಗಳು ಒಟ್ಟು 44 ಅಭ್ಯರ್ಥಿಗಳಿಗೆ ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕೌನ್ಸಿಲಿಂಗ್ ನಡೆಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 080-23561628/23566082/23568223 ಅಥವಾ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ ದೂರವಾಣಿ ಸಂಖ್ಯೆ: 08372-297221 ಅಥವಾ ಆಯಾ ಜಿಲ್ಲೆಯ ಜಂಟಿ ನಿರ್ದೇಶಕರು/ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಇವರನ್ನು ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಶಿಕ್ಷಕ ಸಂಘಟನೆಯೊಂದಿಗೆ ಶಿಕ್ಷಕರು ಅವಿನಾಭಾವ ಸಂಬಂಧ ಹೊಂದಿರಲಿ
## -ಸಭಾಪತಿ ಬಸವರಾಜ ಹೊರಟ್ಟಿ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಶಿಕ್ಷಕರು ಇಂದು ನೆಮ್ಮದಿಯಿಂದ ಪಾಠ ಮಾಡುತ್ತಿದ್ದರೆ ಅದಕ್ಕೆ ಕಾರಣ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ನಾಲ್ಕು ದಶಕಗಳ ಹೋರಾಟದ ಫಲ ಎಂದು ವಿಧಾನಪರಿಷತ್ ಸಭಾಪತಿ ಹಾಗೂ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಬಸವರಾಜ ಹೊರಟ್ಟಿಯವರು ಹೇಳಿದರು.

ಅವರು ಗದಗ ಜಿಲ್ಲಾ ಕರ್ನಾಟಕ ಸೆಕಂಡರಿ ಸ್ಕೂಲ್ ಟೀಚರ್ ಅಸೋಸಿಯೇಶನ್‍ನ ನಿಕಟಪೂರ್ವ ಅಧ್ಯಕ್ಷರಾದ ಎನ್.ವಿ.ಪಾಟೀಲ ಹಾಗೂ ಅವರ ಸ್ನೇಹಿತರು ಆ ಸಂಘಟನೆ ತೊರೆದು ಕರ್ನಾಟಕ ಮಾಧ್ಯಮಿಕ ಶಾಲಾ ನೌಕರರ ಸಂಘದ ಸದಸ್ಯತ್ವ ಸ್ವೀಕರಿಸುವ ಕಾರ್ಯಕ್ರಮದಲ್ಲಿ ಸದರಿಯವರಿಗೆ ಸದಸ್ಯತ್ವ ಪ್ರಮಾಣ ಪತ್ರ ನೀಡಿ ಮಾತನಾಡಿದ ಅವರು 1976ರಿಂದ ಕರ್ನಾಟಕ ಮಾಧ್ಯಮಿಕ ಶಾಲಾ ನೌಕರರ ಸಂಘ ಶಿಕ್ಷಕರ ಹಿತ

ಕಾಯುವುದಕ್ಕಾಗಿ ನೂರಾರು ಹೋರಾಟಗಳನ್ನು ಮಾಡುತ್ತಾ ಬಂದಿದೆ. ಹೋರಾಟಗಳಿಂದಲೇ ಇಂದು ಶಿಕ್ಷಕರು ಎಲ್ಲ ಸೌಲಭ್ಯಗಳನ್ನು ಪಡೆದು ನೆಮ್ಮದಿಯಿಂದ ಪಾಠ ಮಾಡುತ್ತಿದ್ದಾರೆ. ಆದಾಗ್ಯೂ ದಿನಕ್ಕೊಂದು ಅವೈಜ್ಞಾನಿಕ ಆದೇಶಗಳು ಶಿಕ್ಷಕರನ್ನು ಆತಂಕಕ್ಕೀಡು ಮಾಡಿವೆ. ಮುಂಬರುವ ದಿನಗಳಲ್ಲಿ ಖಾಸಗಿ ಶಾಲಾ ಶಿಕ್ಷಕರ ಭವಿಷ್ಯದ ಮೇಲೆ ಸಾಕಷ್ಟು ಪೆಟ್ಟು ಬೀಳುವ ಸಂಗತಿಗಳು ಗೋಚರಿಸುತ್ತಿವೆ. ಈಗಿನಿಂದಲೇ ಗುಣಮಟ್ಟದ ಶಿಕ್ಷಣ ನೀಡುವತ್ತ ಶಿಕ್ಷಕರು ತಮ್ಮ ಮನೋಸ್ಥಿತಿಯನ್ನು ಬದಲಿಸಿಕೊಳ್ಳಬೇಕು. ಜೊತೆಗೆ ಸ್ಪರ್ಧಾತ್ಮಕ ಜಗತ್ತಿನಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಈ ಹಿಂದೆ ಇದ್ದ ಪರಿಸ್ಥಿತಿ ಇಂದು ಇಲ್ಲದಾಗಿದೆ. ಕಾಲಕ್ಕೆ ತಕ್ಕಂತೆ ಶಿಕ್ಷಕರು ಸಹ ಹೊಸ ಹೆಜ್ಜೆಯತ್ತ, ಚಿಂತನೆಯತ್ತ ಕಾಲಿಟ್ಟಾಗ ಮಾತ್ರ ತಮ್ಮ ಭವಿಷ್ಯ ಭದ್ರವಾಗಲು ಸಾಧ್ಯ. ಶಿಕ್ಷಕರು ಸಂಘಟನೆ ಜೊತೆಗೆ ಅವಿನಾಭಾವ ಸಂಬಂಧ ಹೊಂದುವ ಮೂಲಕ ಸಂಘಟನೆಯನ್ನು ಕೂಡ ಸಶಕ್ತಗೊಳಿಸಲು ಮುಂದಾಗಬೇಕೆಂದು ಹೇಳಿ ಸದಸ್ಯತ್ವ ಸ್ವೀಕರಿಸಿದ ಸದಸ್ಯರಿಗೆ ಶುಭವಾಗಲಿ ಎಂದು ಹೇಳಿದರು.

ಕರ್ನಾಟಕ ಸೆಕಂಡರಿ ಸ್ಕೂಲ್ ಟೀಚರ್ ಅಸೋಸಿಯೇಶನ್‌ನ ನಿಕಟಪೂರ್ವ ಅಧ್ಯಕ್ಷರಾದ ಎನ್.ವಿ.ಪಾಟೀಲ ಸದಸ್ಯತ್ವ ಸ್ವೀಕರಿಸಿ ಮಾತನಾಡಿ ಕಾರಣಾಂತರಗಳಿಂದ ಬೇರೆ ಸಂಘಟನೆಯೊಂದಿಗೆ ಗುರುತಿಸಿಕೊಂಡಿದ್ದು ಬಹಳ ದೊಡ್ಡ ತಪ್ಪಾಗಿದೆ. ಬಸವರಾಜ ಹೊರಟ್ಟಿಯವರ ಹೋರಾಟದ ಫಲದಿಂದಲೇ ನಾವೆಲ್ಲ ಇಂದು ನೆಮ್ಮದಿಯಾಗಿದ್ದೇವೆ. ಬಸವರಾಜ ಹೊರಟ್ಟಿಯವರ ನಾಯಕತ್ವದ ಮೇಲೆ ನಂಬಿಕೆ ಇಟ್ಟು ಮಾಧ್ಯಮಿಕ ಶಾಲಾ ನೌಕರರ ಸಂಘದ ಸದಸ್ಯತ್ವವನ್ನು ಇಂದು ಅತ್ಯಂತ ಹೃದಯಪೂರ್ವಕವಾಗಿ ಸ್ವೀಕರಿಸಿದ್ದೇವೆ. ಹಿಂದೆ ಮಾಡಿದ ತಪ್ಪನ್ನು ಮುಂದೆ ಎಂದೂ ಮಾಡುವುದಿಲ್ಲವೆಂದು ಹೇಳಿದರು.

ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘದ ಗೌರವಾಧ್ಯಕ್ಷ ಡಾ.ಬಸವರಾಜ ಧಾರವಾಡ ಮಾತನಾಡಿ ಮಾಧ್ಯಮಿಕ ಶಾಲಾ ನೌಕರರ ಸಂಘದ ಹಲವಾರು ಸ್ನೇಹಿತರು ಬೇರೆ ಬೇರೆ ಕಾರಣಗಳಿಂದ ದೂರಾಗಿದ್ದರು ಈಗ ಅವರೆಲ್ಲ ಮತ್ತೆ ತಮ್ಮ ಸ್ವಂತ ಮನೆಗೆ ಬರುತ್ತಿರುವುದು ಹೆಮ್ಮೆಯ ಸಂಗತಿ. ಬಿನ್ನಾಭಿಪ್ರಾಯಗಳು ಏನೇ ಇರಲಿ ಸಂಘಟನೆ ಹೋರಾಟದಲ್ಲಿ ನಾವೆಲ್ಲ ಒಂದಾದಾಗ ಮಾತ್ರ ನಮ್ಮ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಹೇಳಿ ಸದಸ್ಯತ್ವ ಸ್ವೀಕರಿಸಿದ ಸರ್ವ ಸದಸ್ಯರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಸ್.ಎಂ.ಅಗಡಿ, ಸಿ.ಆರ್.ಹಿರೇಮಠ, ಸಿ.ಎಸ್.ಬಂಡಿಹಾಳ, ಎನ್.ಎಸ್.ಸಜ್ಜನ, ಆರ್.ಎಂ.ಗೌಡರ, ಎನ್.ಎಸ್.ಹಂಜಗಿ, ಎಲ್.ಎಂ.ಲಮಾಣಿ, ದಳವಿ, ದೊಡ್ಡಮನಿ, ಎಸ್.ಎಸ್.ಗಡ್ಡದ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಶೇಕಡ 50% ರಿಯಾಯಿತಿ ದರದಲ್ಲಿ ಪುಸ್ತಕಗಳ ಮಾರಾಟ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆಗಸ್ಟ್ 01, 2021 ರಿಂದ ಆಗಸ್ಟ್ 31-08-2021ರವರೆಗೆ ಶೇಕಡ 50% ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು. ಓದುಗರು ಆನ್‌ಲೈನ್ ಮೂಲಕವೂ ಶೇಕಡ 50% ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದ್ದು, ವೆಬ್‌ಸೈಟ್ ವಿಳಾಸ: www.kuvempubhashabharathi.karnataka.gov.in ನಲ್ಲಿ ಪುಸ್ತಕಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ ಏಕಲವ್ಯ ಮಾದರಿ/ಅಟಲ್ ಬಿಹಾರಿ ವಾಜಪೇಯಿ/ ಡಾ.ಬಿ.ಆರ್.ಅಂಬೇಡ್ಕರ್/ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಿಗೆ 2021-22ನೇ ಸಾಲಿನ 6ನೇ ತರಗತಿ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಗಸ್ಟ್ 10, 2021 ಕೊನೆಯ ದಿನಾಂಕವಾಗಿದೆ. ಪ್ರವೇಶ ಪರೀಕ್ಷೆಯನ್ನು ದಿನಾಂಕ: 16-09-2021 ರಂದು ನಡೆಸಲಾಗುವುದು. ಪ್ರವೇಶ ಪತ್ರಗಳನ್ನು ದಿನಾಂಕ: 04-09-2021 ರಿಂದ 13-09-2021 ರವರೆಗೆ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಪ್ರವೇಶ ಪರೀಕ್ಷೆಯ ಫಲಿತಾಂಶ ಮತ್ತು ಮೊದಲನೇ ಸುತ್ತಿನ ಶಾಲೆಗಳ ಹಂಚಿಕೆಯನ್ನು ಪ್ರಾಧಿಕಾರ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೆಬ್‌ಸೈಟ್: http://kea.kar.nic.in ನಲ್ಲಿ ಪ್ರಕಟಿಸಲಾಗುವುದು.

ವಿಶೇಷ ಅವಕಾಶ: ಕೋವಿಡ್–19ರ ಸಾಂಕ್ರಾಮಿಕ ರೋಗದಿಂದ ಮೃತಪಟ್ಟ ಪೋಷಕರ ಮಕ್ಕಳಿಗೆ ರಾಜ್ಯದ ಯಾವುದೇ ವಸತಿ ಶಾಲೆಯಲ್ಲಿ ಖಾಲಿ ಇರುವ ಸ್ಥಾನಕ್ಕೆ ನೇರವಾಗಿ ಪ್ರವೇಶ ಕಲ್ಪಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: keauthority-ka@nic.in ಹಾಗೂ ಸಹಾಯವಾಣಿ ಸಂಖ್ಯೆ: 080–23460480 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಆದೇಶದಲ್ಲಿ ನಮೂದಾಗಿರುವಂತೆ ಆದೇಶಗಳನ್ನು ಪ್ರಕಟಿಸಲು ಸೂಚನೆ

ಬೆಂಗಳೂರು, ಆಗಸ್ಟ್ 02 (ಕರ್ನಾಟಕ ವಾರ್ತೆ):

ಗ್ರಾಹಕ ಸಂರಕ್ಷಣಾ ಕಾಯ್ದೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಆಯೋಗದ ಆದೇಶಗಳನ್ನು ಎಲ್ಲಾ ಜನರಿಗೂ ತಲುಪಿಸುವುದು, ಸಾರ್ವಜನಿಕರ ಗಮನಕ್ಕೆ ತರುವುದು ಮತ್ತು ಈ ದಿಸೆಯಲ್ಲಿ ಸಾರ್ವಜನಿಕರನ್ನು ಎಚ್ಚರಗೊಳಿಸುವುದು ಸರ್ಕಾರ, ಗ್ರಾಹಕ ಸಂಸ್ಥೆಗಳು ಹಾಗೂ ಗ್ರಾಹಕ ಆಯೋಗಗಳ ಕರ್ತವ್ಯವಾಗಿರುತ್ತದೆ. ಆದ ಕಾರಣ, ಕನ್ನಡ ಮತ್ತು ಆಂಗ್ಲ ಭಾಷೆಯ ಎಲ್ಲ ದಿನಪತ್ರಿಕೆಗಳಲ್ಲಿ ಈ ಆಯೋಗದ ಆದೇಶಗಳನ್ನು ಆದೇಶದಲ್ಲಿ ನಮೂದಾಗಿರುವಂತೆ ಆಯೋಗದ ಹೆಸರು, ಅಧ್ಯಕ್ಷರು ಮತ್ತು ಸದಸ್ಯರ ಹೆಸರಿನೊಂದಿಗೆ ಪ್ರಕಟಿಸಲು ಕ್ರಮವಹಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ನಗರ 1ನೇ ಹೆಚ್ಚುವರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಮತ್ತು ಸಹಾಯಕ ಆಡಳಿತಾಧಿಕಾರಿ ತಿಳಿಸಿದ್ದಾರೆ.

ಆಯೋಗದಲ್ಲಿ ಪ್ರತಿ ತಿಂಗಳು ಸುಮಾರು 30 ರಿಂದ 40 ಪ್ರಕರಣಗಳಲ್ಲಿ ಅಂತಿಮ ಆದೇಶಗಳನ್ನು ನೀಡಲಾಗುತ್ತಿದ್ದು, ಈ ಆದೇಶಗಳನ್ನು ವೆಬ್‌ಸೈಟ್ ವಿಳಾಸ: www.confonet.nic.in ನಲ್ಲಿ ಅಪ್‌ಲೋಡ್ ಮಾಡಲಾಗುತ್ತದೆ. ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯಲ್ಲಿ ಹಾಲಿ ಪ್ರಕಟವಾಗುತ್ತಿರುವ ಆದೇಶಗಳಲ್ಲಿ ಆದೇಶ ಉದ್ಘೋಷಿಸಿದವರ ಹೆಸರನ್ನು ಪ್ರಕಟಿಸುತ್ತಿಲ್ಲ, ಆದೇಶ ಪ್ರಕಟಿಸುವಾಗ ಅದರಲ್ಲಿ ಸಂಬಂಧಪಟ್ಟ ಆಯೋಗದ ಹೆಸರು, ಅಧ್ಯಕ್ಷರ ಹೆಸರು ಮತ್ತು ಸದಸ್ಯರ ಹೆಸರನ್ನು ಪ್ರಕಟಿಸಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

**ವಾಯು ಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 02.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯು ಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯ ಕಾರಕ |
|---|---|---|---|---|
| 1 | ಪಶುವೈದ್ಯಕೀಯ ಕಾಲೇಜು, ಹೆಬ್ಬಾಳ | 34 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 40 | ಉತ್ತಮ | $PM_{10}$ |
| 3 | ಕವಿಕ, ಮೈಸೂರು ರಸ್ತೆ | * | * | * |
| 4 | ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 34 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರ ರೇಷ್ಮೆ ಮಂಡಳಿ ಹತ್ತಿರ | 89 | ತೃಪ್ತಿಕರ | $PM_{10}$ |
| 6 | ನಗರ ರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 53 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 46 | ಉತ್ತಮ | $PM_{10}$ |
| (02.8.2021 at 10.05 AM) | | | | |

| | | | | |
|---|---|---|---|---|
| 8 | BWSSB, ಕಾಡಬೀಸನಹಳ್ಳಿ | 120 | ಸಾಧಾರಣ | CO |
| 9 | ಪೀಣ್ಯ | 50 | ಉತ್ತಮ | $PM_{2.5}$ |
| 10 | ಬಿಟಿಎಂ ಲೇಔಟ್ | 63 | ತೃಪ್ತಿಕರ | CO |

| ವರ್ಗ (ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯ ಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 02.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 34 | Good | $PM_{10}$ |
| 2 | Jayanagar 5th Block, Shalini ground | 40 | Good | $PM_{10}$ |
| 3 | KAVIKA, Mysore Road | * | * | * |
| 4 | Rajeev Gandhi Institute of Chest Disease, NIMHANS, Hombegowda Nagar | 34 | Good | $PM_{10}$ |
| 5 | HSR Layout, near Central Silkboard | 89 | Satisfactory | $PM_{10}$ |
| 6 | City Railway Station, Magestic, Bengaluru | 53 | Satisfactory | $PM_{10}$ |
| 7 | Saneguruvanahalli, Nisarga Bhavan, KSPCB, Shivanagara | 46 | Good | $PM_{10}$ |
| **(02.8.2021 at 10.05 AM)** | | | | |
| 8 | BWSSB, Kadabesanahalli | 120 | Moderate | CO |
| 9 | Peenya | 50 | Good | $PM_{2.5}$ |
| 10 | BTM Layout | 63 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |